ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 09-10-2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| **1.** | ಬೆಳ್ಳಿ ಸಿನಿಮಾ – ಬೆಳ್ಳಿಮಾತು:<br><br>ಬೆಳ್ಳಿ ಸಿನಿಮಾ ಪ್ರದರ್ಶನ –"ಇಂಗಳೆ ಮಾರ್ಗ"<br><br>ಬೆಳ್ಳಿಮಾತು:<br><br>ವಿಶಾಲ್ ರಾಜ್,<br>"ಇಂಗಳೆ ಮಾರ್ಗ"<br>ಚಿತ್ರದ ನಿರ್ದೇಶಕರು<br><br>ಅಧ್ಯಕ್ಷತೆ:<br><br>ಎಸ್. ವಿ. ರಾಜೇಂದ್ರಸಿಂಗ್ ಬಾಬು,<br>ಅಧ್ಯಕ್ಷರು<br>ಕರ್ನಾಟಕ ಚಲನಚಿತ್ರ ಅಕಾಡೆಮಿ | **10-10-2015**<br>ಶನಿವಾರ<br>ಸಂಜೆ **4-00**<br>ಗಂಟೆಗೆ | ಚಾಮುಂಡೇಶ್ವರಿ ಸ್ಟುಡಿಯೋ,<br>ಮಿಲ್ಲರ್ಸ್ ರಸ್ತೆ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## ರಾಜ್ಯ ಮಟ್ಟದ ಪರಿಶೀಲನಾ ಸಮಿತಿ ಸಭೆ

ಬೆಂಗಳೂರು, ಅಕ್ಟೋಬರ್ 9 (ಕರ್ನಾಟಕ ವಾರ್ತೆ)

ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗ, ನವದೆಹಲಿ ಇವರು ಅಕ್ಟೋಬರ್ 13 ರಿಂದ ಅಕ್ಟೋಬರ್ 18 ರವರೆಗೆ ರಾಜ್ಯಕ್ಕೆ ಭೇಟಿ ನೀಡಲಿದ್ದು, ಭೇಟಿಯ ಸಂದರ್ಭದಲ್ಲಿ ರಾಜ್ಯ ಸರ್ಕಾರದ ಉನ್ನತ ಅಧಿಕಾರಿಗಳು, ಸಿಂಡಿಕೇಟ್ ಬ್ಯಾಂಕ್, ಕೆನರಾ ಬ್ಯಾಂಕ್ ಹಾಗೂ ವಿಜಯಾ ಬ್ಯಾಂಕ್‌ನ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಪರಿಶೀಲನೆ ನಡೆಸಲಿದೆ.

ಈ ಭೇಟಿ ಸಂದರ್ಭದಲ್ಲಿ ಆಯೋಗವು ಅಕ್ಟೋಬರ್ 15 ರಂದು ಮಧ್ಯಾಹ್ನ 2–00 ಗಂಟೆಗೆ ಬೆಂಗಳೂರು ವಸಂತನಗರದಲ್ಲಿರುವ ಮಿಲ್ಲರ್ಸ್ ರಸ್ತೆಯ ಡಾ. ಬಿ. ಆರ್. ಅಂಬೇಡ್ಕರ್ ಭವನದಲ್ಲಿ ಪರಿಶಿಷ್ಟ ಜಾತಿ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳು, ಪರಿಶಿಷ್ಟ ಜಾತಿ ನೌಕರರ ಸಂಘದ ಪದಾಧಿಕಾರಿಗಳು, ಹಾಗೂ ಸಾರ್ವಜನಿಕರನ್ನೂ ಸಹ ಭೇಟಿಮಾಡಿ, ಚರ್ಚಿಸಲಿದೆ.

ಆಯೋಗದೊಂದಿಗೆ ಭೇಟಿಮಾಡಿ ಚರ್ಚಿಸಲು ಇಚ್ಛಿಸುವ ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳು, ಪರಿಶಿಷ್ಟ ಜಾತಿ ನೌಕರರ ಸಂಘದ ಪದಾಧಿಕಾರಿಗಳು, ಹಾಗೂ ಸಾರ್ವಜನಿಕರು ಸಮಾಜ ಕಲ್ಯಾಣ ಇಲಾಖೆಯನ್ನು ಸಂಪರ್ಕಿಸಿ, ಹೆಸರುಗಳನ್ನು ನೋಂದಾಯಿಸಬಹುದು. (ದೂರವಾಣಿ ಸಂಖ್ಯೆ 080–22204821)

ಪಲ್ಲವಿ:ಬಾಬು:ಜಿಪಿಆರ್.

## ಚರ್ಮ ಕುಶಲಕರ್ಮಿಗಳಿಂದ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 9 (ಕರ್ನಾಟಕ ವಾರ್ತೆ)

ಡಾ. ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಜಾತಿಯ ಚರ್ಮ ಕುಶಲಕರ್ಮಿಗಳ ಆರ್ಥಿಕ ಮತ್ತು ಸಾಮಾಜಿಕ ಬೆಳವಣಿಗೆಗಾಗಿ ಹಲವು ಯೋಜನೆಗಳನ್ನು ಹಮ್ಮಿಕೊಂಡಿದ್ದು 2015–16 ನೇ ಸಾಲಿಗೆ ಕ್ರಿಯಾ ಯೋಜನೆ ರೂಪಿಸಿ ಸರ್ಕಾರದ ಅನುಮೋದನೆ ಪಡೆಯಲಾಗಿದೆ.

(55 ಕೋಟಿ ರೂ ಅನುದಾನ ಮಂಜೂರಾಗಿದ್ದು) ವಿವಿಧ ಯೋಜನೆಗಳಾದ ಪಾದರಕ್ಷೆ ಮತ್ತು ಚರ್ಮವಸ್ತುಗಳ ತಯಾರಿಕೆಗೆ ತರಬೇತಿ ಕಾರ್ಯಕ್ರಮಗಳು, ಸ್ವಯಂ ಉದ್ಯೋಗ ಯೋಜನೆಗಳು ಮತ್ತು ವಸತಿ ಕಾರ್ಯಾಗಾರ ನಿರ್ಮಾಣ ಯೋಜನೆಗಳಿಗೆ ಅರ್ಹ ಕುಶಲಕರ್ಮಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹರಿಂದ ಅಕ್ಟೋಬರ್ 28 ರವರೆಗೆ ಅರ್ಜಿಯನ್ನು ಸ್ವೀಕರಿಸಲಾಗುವುದು.

ಅರ್ಜಿಗಳು ಎಲ್ಲಾ ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳ ಕಚೇರಿಗಳಲ್ಲಿ ಉಚಿತವಾಗಿ ದೊರೆಯಲಿದೆ. ಕುಶಲಕರ್ಮಿಗಳು ಈ ಅವಕಾಶವನ್ನು ಉಪಯೋಗಿಸಿಕೊಂಡು ವಿವಿಧ ಯೋಜನೆಗಳ ಪ್ರಯೋಜನ ಪಡೆಯುವಂತೆ ತಿಳಿಸಲಾಗಿದೆ ಹೆಚ್ಚಿನ ಮಾಹಿತಿಗಾಗಿ ಲಿಡ್ಕರ್ ನಿಗಮದ ಸಂಬಂಧಪಟ್ಟ ಜಿಲ್ಲಾ ಸಂಯೋಜಕರುಗಳನ್ನು ಅಥವಾ ಪ್ರಧಾನ ಕಚೇರಿಯನ್ನು (ದೂರವಾಣಿ ಸಂಖ್ಯೆ 080-22238726 ) ಮೂಲಕ ಸಂಪರ್ಕಿಸಬಹುದಾಗಿದೆ.

ಪಲ್ಲವಿ:ಬಾಬು:ಜಿಪಿಆರ್.

## "ಭಾಷಾ ಭಾವೈಕ್ಯ ಸಮಾವೇಶ – 2015"

ಬೆಂಗಳೂರು, ಅಕ್ಟೋಬರ್ 9 (ಕರ್ನಾಟಕ ವಾರ್ತೆ)

ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಅಕ್ಟೋಬರ್ 11 ರಂದು ಬೆಳಿಗ್ಗೆ 10-30 ಗಂಟೆಗೆ ಮಹಾರಾಷ್ಟ್ರದ ಸಾಂಗಾಲಿ ಜಿಲ್ಲೆಯ ಜತ್ತದ ಕೆ.ಎಂ. ಹೈಸ್ಕೂಲ್ ಆವರಣದಲ್ಲಿ ಹೊರರಾಜ್ಯ ಮಹಾರಾಷ್ಟ್ರ ವಿದ್ಯಾರ್ಥಿಗಳಿಗೆ "ಭಾಷಾ ಭಾವೈಕ್ಯ ಸಮಾವೇಶ – 2015" ಸಮಾರಂಭವನ್ನು ಏರ್ಪಡಿಸಿದೆ.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಎಲ್. ಹನುಮಂತಯ್ಯ ಸಮಾರಂಭವನ್ನು ಉದ್ಘಾಟಿಸುವರು. ನಾಗಣಸೂರನ ಶ್ರೀ ಗುರು ಬಸವೇಶ್ವರ ಹಿರೇಮಠದ ಶ್ರೀ ಷ. ಬ್ರ ಶ್ರೀಕಂಠ ಶಿವಾಚಾರ್ಯ ಅವರು ಸಮಾರಂಭದ ಅಧ್ಯಕ್ಷತೆ ವಹಿಸಲಿರುವ ಈ ಸಮಾರಂಭದಲ್ಲಿ ಅನೇಕ ಸ್ಥಳೀಯ ಗಣ್ಯರು ಪಾಲ್ಗೊಳ್ಳಲಿದ್ದಾರೆ.

ಅಂದು ಬೆಳಿಗ್ಗೆ 8-30 ಗಂಟೆಗೆ ಬಾಷಾ ಬಾಂಧವ್ಯ ಜಾಥಾ, 10-30 ಗಂಟೆಗೆ ವೇದಿಕೆ ಕಾರ್ಯಕ್ರಮ, ಮಧ್ಯಾಹ್ನ 12-30 ಗಂಟೆಗೆ ವಿಚಾರ ಸಂಕಿರಣ ಏರ್ಪಡಿಸಿದ್ದು, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಎಲ್. ಹನುಮಂತಯ್ಯ ಸಮಾರಂಭದ ಅಧ್ಯಕ್ಷತೆ ವಹಿಸುವರು. ಅಂದು ಸಂಜೆ 6-00 ಗಂಟೆಗೆ ಸಾಂಸ್ಕೃತಿಕ ವೈಭವ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಪಲ್ಲವಿ::ಬಾಬು:ಜಿಪಿಆರ್.

## ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಅಕ್ಟೋಬರ್ 9 (ಕರ್ನಾಟಕ ವಾರ್ತೆ)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಹೈದರಾಬಾದ್-ಕರ್ನಾಟಕ ಪ್ರದೇಶದ ಜಿಲ್ಲೆಗಳಲ್ಲಿ ಖಾಲಿ ಇರುವ ಗ್ರೂಪ್ 'ಡಿ' ಹುದ್ದೆಗಳ ಆಯ್ಕೆಗಾಗಿ ನಡೆಸಿದ ಮೂಲ ದಾಖಲಾತಿ ಪರಿಶೀಲನೆಯ ನಂತರ ತಾತ್ಕಾಲಿಕ ಆಯ್ಕೆಯಪಟ್ಟಿಯನ್ನು ಇಲಾಖೆಯ ವೆಬ್‌ಸೈಟ್ **www.karhfw.gov.in/drc.aspx** ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಪಲ್ಲವಿ::ಬಾಬು:ಜಿಪಿಆರ್.

# 'ಬಾಹ್ಯಾಕಾಶ ತಂತ್ರಜ್ಞಾನ ಮತ್ತು ಕೃಷಿ' ವಿಷಯಗಳಿಗೆ ಇತ್ತೀಚಿನ ದಿನಗಳಲ್ಲಿ ಪ್ರಾಮುಖ್ಯತೆ

ಬೆಂಗಳೂರು, ಅಕ್ಟೋಬರ್ 9 (ಕರ್ನಾಟಕ ವಾರ್ತೆ)

ಇತ್ತೀಚಿನ ದಿನಗಳಲ್ಲಿ 'ಬಾಹ್ಯಾಕಾಶ ತಂತ್ರಜ್ಞಾನ ಮತ್ತು ಕೃಷಿ' ವಿಷಯ ಬಹಳ ಪ್ರಾಮುಖ್ಯತೆ ಪಡೆದುಕೊಂಡಿದೆ ಎಂದು ಭಾರತೀಯ ಬಾಹ್ಯಕಾಶ ಸಂಶೋಧನಾ ಸಂಸ್ಥೆಯ ಅಧ್ಯಕ್ಷ ಎ.ಎಸ್. ಕಿರಣ್‌ಕುಮಾರ್ ಅವರು ತಿಳಿಸಿದರು.

ಕೃಷಿ ವಿಶ್ವವಿದ್ಯಾಲಯದ ಕುವೆಂಪು ಸಭಾಂಗಣದಲ್ಲಿ ಜರುಗಿದ ಸಂಸ್ಥಾಪನಾ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡುತ್ತಾ, ಹಿಂದೆ ಹವಾಮಾನ ವೈಪರಿತ್ಯದಿಂದ ಉಂಟಾಗುತ್ತಿದ್ದ ಅತೀವೃಷ್ಟಿ, ಅನಾವೃಷ್ಟಿಯಿಂದಾಗಿ 20-30 ಸಾವಿರ ಮಂದಿ ಪ್ರಾಣ ಕಳೆದುಕೊಳ್ಳುತ್ತಿದ್ದರು. ಆದರೆ ಈಗಿನ ಪರಿಸ್ಥಿತಿಯಲ್ಲಿ ಉಪಗ್ರಹ ತಂತ್ರಜ್ಞಾನ 'ಜಿಯೋ ಸ್ಟೇಶನ್'ನಿಂದ ಪಡೆದ ಹವಾಮಾನ ಮಾಹಿತಿಯಿಂದ ಜನಹಾನಿ ಪ್ರಮಾಣ ಕಡಿಮೆಯಾಗಿದೆ ಎಂದು ತಿಳಿಸಿದರು.

ಉಪಗ್ರಹದಿಂದ ಮಣ್ಣು , ನೀರು, ಕೃಷಿ ಬೆಳೆ ಹಾಗೂ ನೀರಾವರಿ ಪದ್ಧತಿಗಳ ಬಗ್ಗೆ ಮಾಹಿತಿ ಪಡೆದು ಅದನ್ನು ಅಳವಡಿಸಿಕೊಂಡು ಕೃಷಿ ಅಭಿವೃದ್ಧಿ ಮಾಡಲು ಪ್ರಯತ್ನಿಸಲಾಗುತ್ತಿದೆ ಎಂದ ಅವರು ಯಾವ ಯಾವ ಜಾಗದಲ್ಲಿ ಇಳುವರಿ ಮಾಡಬೇಕು, ಮೂಲಭೂತ ನೀರಾವರಿ ಬಳಕೆ, ಹಾಗೂ ಹೆಚ್ಚಿನ ಇಳುವರಿ ಮಾಡಲು ಹವಾಮಾನ ವರದಿ ಮಾಹಿತಿಯನ್ನು ಪಡೆಯಬಹುದಾಗಿದೆ ಎಂದರು.

ಒಣಭೂಮಿಯಲ್ಲಿ ಉತ್ಪಾದಕತೆ ಹೆಚ್ಚಿಸಲು ಸುಜಲ ಯೋಜನೆಯಡಿ ಮಾಹಿತಿ ಪಡೆಯಬಹುದಾಗಿದ್ದು ಈ ಯೋಜನೆಗೆ ವಿಶ್ವ ಬ್ಯಾಂಕ್ ಸಹ ಸಮ್ಮತಿ ನೀಡಿದೆ ಎಂದರು.

ಉಪಗ್ರಹಗಳಿಂದ ಇನ್ನೂ ಹೆಚ್ಚಿನ ಮಾಹಿತಿ ದಿನನಿತ್ಯ ಪಡೆಯುವಂತೆ ಮಾಡಲು ಇನ್ನೂ ಹೆಚ್ಚಿನ ಆವಿಷ್ಕಾರಗಳನ್ನು ಮಾಡಿಕೊಳ್ಳಲಾಗುತ್ತಿದೆ ಎಂದು ತಿಳಿಸಿದ ಅವರು, ಕೃಷಿ ಕ್ಷೇತ್ರಗಳಲ್ಲಿ ಸಂಶೋಧನೆ ಮಾಡುತ್ತಿರುವ ವಿಜ್ಞಾನಿಗಳು ಇಂತಹ ಕ್ಷೇತ್ರಗಳಲ್ಲಿ ತೊಡಗಿಕೊಂಡಾಗ ಅಭಿವೃದ್ಧಿ ಕಾಣಲು ಸಾಧ್ಯವಾಗುತ್ತದೆ ಎಂದರು.

ಕೃಷಿವಿಶ್ವವಿದ್ಯಾಲಯ ಕುಲಪತಿಗಳು ಮಾತನ್ನಾಡಿ, ಕೃಷಿ ಕ್ರಾಂತಿಯ ನೆನಪಾಗಿ ಈ ಸಂಸ್ಥಾಪನಾ ದಿನಾಚರಣೆ ಆಚರಿಸಲಾಗುತ್ತಿದೆ. ಬೋಧಕರು, ಸಂಶೋಧಕರು ಹಾಗೂ ವಿಸ್ತರಣಾಧಿಕಾರಿಗಳು ತಾಂತ್ರಿಕತೆಯನ್ನು ಅಳವಡಿಸಿಕೊಂಡು ಇನ್ನೂ ಹೆಚ್ಚಿನ ಸಂಶೋಧನೆಯನ್ನು ಕೈಗೊಳ್ಳಬೇಕೆಂದು ತಿಳಿಸಿದರು.

ವಿಜ್ಞಾನಿಗಳು ಕೈಕೊಂಡ ಸಂಶೋಧನೆಗಳು ರೈತರಿಗೆ ತಲುಪಬೇಕು. ಕೃಷಿಯಲ್ಲಿ ಎಷ್ಟು ಸಂಶೋಧನೆ ಮಾಡಿದರೂ ಕಡಿಮೆಯೆನ್ನಿಸುತ್ತಿದೆ. ಎಂದ ಅವರು ಇಸ್ರೋದ ಮಾಹಿತಿಯೊಂದಿಗೆ ತಾಂತ್ರಿಕತೆಯನ್ನು ಅಳವಡಿಸಿಕೊಂಡು ಕೃಷಿಯಲ್ಲಿ ಇನ್ನೂ ಹೆಚ್ಚಿನ ಅಭಿವೃದ್ಧಿ ಕಾಣುವಲ್ಲಿ ಯಶಸ್ವಿ ಸಾಧಿಸಲು ಪ್ರಯತ್ನಿಸಲಾಗುವುದು ಎಂದರು. .

ಈ ಸಂದರ್ಭದಲ್ಲಿ ಕೃಷಿಗೆ ಸಂಬಂಧಪಟ್ಟ ಪುಸ್ತಕಗಳನ್ನು ಗಣ್ಯರು ಬಿಡುಗಡೆ ಮಾಡಿದರು. ಸಮಾರಂಭದಲ್ಲಿ ಜಗಳೂರು ಶಾಸಕರು ಹೆಚ್.ಪಿ. ರಾಜೇಶ್, ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲಗಳ

**ಬ್ಯೂರೋ ನಿರ್ದೇಶಕರಾದ ಡಾ: ಅಬ್ರಹಾಂ ವರ್ಗೀಸ್, ವ್ಯವಸ್ಥಾಪನಾ ಮಂಡಳಿಯ ಸದಸ್ಯರಾದ ಶ್ರೀಮತಿ ಹೆಚ್. ಸಿ ಆಶಾ ಶೇಷಾದ್ರಿ ಉಪಸ್ಥಿತರಿದ್ದರು.**

ಪಿಕೆ/